## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ತಾಲ್ಲೂಕಿನ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಗಳಲ್ಲಿ ಬರುವ 47 ಹಳ್ಳಿಗಳ 62 ಕೆರೆಗಳಿಗೆ ಹಿರೇಹಟ್ಟಿಹೋಳಿ ಗ್ರಾಮದ ಹತ್ತಿರ ಮಲಪ್ರಭಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ. 379.92 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ಎಂಪಿಜಡ್/13/2018-19/3668, ದಿನಾಂಕ: 03.10.2018.

2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: ಕನೀನಿ/ತಾಂಸ-3/ಸಇಂ-15/ಬಾಗೇವಾಡಿ ಕೆ.ತುಂ.ಯೋ/2018-19/4567, ದಿನಾಂಕ: 16.11.2018.

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಬೆಳಗಾವಿ ತಾಲ್ಲೂಕಿನ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಗಳಲ್ಲಿ ಬರುವ 47 ಹಳ್ಳಿಗಳ 62 ಕೆರೆಗಳಿಗೆ ಹಿರೇಹಟ್ಟಿಹೋಳಿ ಗ್ರಾಮದ ಹತ್ತಿರ ಮಲಪ್ರಭಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ. 379.92 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಬೆಳಗಾವಿ ತಾಲ್ಲೂಕಿನ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಗಳಲ್ಲಿರುವ ಪ್ರದೇಶದಲ್ಲಿ ವರ್ಷದಿಂದ ವರ್ಷಕ್ಕೆ ಮಳೆಯ ಪ್ರಮಾಣ ಕಡಿಮೆಯಾಗುತ್ತಿರುವ ಕಾರಣ ಸುಮಾರು ಹಳ್ಳಿಗಳಿಗೆ ಕುಡಿಯುವ ನೀರಿನ ಕೊರತೆಯಿಂದಾಗಿ ತೊಂದರೆಯಾಗಿದ್ದು, ಇದರಿಂದ ಅಂತರ್ಜಲ ಮಟ್ಟ ಕುಸಿದಿದ್ದು ಕೊಳವೆಬಾವಿಗಳು ಮತ್ತು ತೆರೆದ ಬಾವಿಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿರುವುದರಿಂದ, 62 ಕೆರೆಗಳನ್ನು ಕುಡಿಯುವ ನೀರಿಗಾಗಿ ತುಂಬಿಸುವ ಯೋಜನೆಯಾಗಿದೆ. ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಯ ಹಿರೇಹಟ್ಟಿಹೋಳಿ ಗ್ರಾಮದ ಹತ್ತಿರ ಜಾಕ್‌ವೆಲ್ ಮತ್ತು ಪಂಪ್‌ಹೌಸ್ ನಿರ್ಮಿಸಿ ಮಲಪ್ರಭಾ ನದಿಯಿಂದ 0.469 ಟಿ.ಎಂ.ಸಿ ನೀರನ್ನು ಎತ್ತಿ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಯ 62 ಕೆರೆಗಳನ್ನು ತುಂಬಿಸಲು ಯೋಜಿಸಲಾಗಿದೆ. ಸದರಿ ಹೋಬಳಿಗಳಲ್ಲಿ ಬರುವ 62 ಕೆರೆಗಳಿಗೆ ಮಳೆಯ ಅಭಾವದಿಂದಾಗಿ ಪೂರ್ಣ ಪ್ರಮಾಣದಲ್ಲಿ ತುಂಬಲಾಗುತ್ತಿಲ್ಲ ಕಾರಣ ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ನೀರು ತುಂಬಿಸುವ ಯೋಜನೆಯಾಗಿರುತ್ತದೆ. ಗುಣಮಟ್ಟದ ಕುಡಿಯುವ ನೀರನ್ನು ಒದಗಿಸಿ ತೊಂದರೆಯನ್ನು ತಪ್ಪಿಸಲು ಬಾಗೇವಾಡಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಸದರಿ ಯೋಜನೆಗೆ ಅವಶ್ಯವಿರುವ 469.46 Mcft ನೀರಿನ ಲಭ್ಯತೆ ಇರುವುದಾಗಿ ತಿಳಿದುಬಂದಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕನೀನಿನಿ ಇವರು ಮೇಲೆ ಓದಲಾದ (2)ರ ಪತ್ರದಲ್ಲಿ ತಿಳಿಸಿರುತ್ತಾರೆ.

...2

ಈ ವಿಷಯವನ್ನು ದಿನಾಂಕ: 27.08.2018 ರಂದು ಜರುಗಿದ 85ನೇ ಕರ್ನಾಟಕ ನೀರಾವರಿ ನಿಗಮ ನಿಯಮಿತದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿದ್ದು, ಮಂಡಳಿಯಲ್ಲಿ ಚರ್ಚಿಸಿ ನಂತರ ಅಂದಾಜು ಪರಿಶೀಲನಾ ಸಮಿತಿಯ ಶಿಫಾರಸ್ಸಿನಂತೆ ಬೆಳಗಾವಿ ತಾಲ್ಲೂಕಿನ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಗಳಲ್ಲಿ ಬರುವ 47 ಹಳ್ಳಿಗಳ 62 ಕೆರೆಗಳಿಗೆ ಹಿರೇಹಟ್ಟಿಹೋಳಿ ಗ್ರಾಮದ ಹತ್ತಿರ ಮಲಪ್ರಭಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ. 379.92 ಕೋಟಿಗಳ ವಿವರವಾದ ಯೋಜನಾ ವರದಿಗೆ ಅನುಮೋದನೆ ನೀಡಿ ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸುವಂತೆ ಶಿಫಾರಸ್ಸು ಮಾಡಲಾಗಿದೆ. ಪ್ರಸ್ತುತ ಸಾಲಿನಲ್ಲಿ ಸದರಿ ಯೋಜನೆಗೆ ಕರ್ನಾಟಕ ನೀರಾವರಿ ನಿಗಮವು 1/3 ಅನುದಾನದ ಪ್ರಾವಿಧಾನತೆಯನ್ನು ಮಾಡಿಕೊಂಡಿದ್ದು, 2018-19ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದೆ. ಮುಂದಿನ ವರ್ಷಗಳ ಸರ್ಕಾರದ ಆಯವ್ಯಯದಲ್ಲಿ ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಒದಗಿಸುವ ಅನುದಾನದಲ್ಲಿ ಸದರಿ ಯೋಜನೆಗೆ ಅನುದಾನ ಅಳವಡಿಸಿಕೊಳ್ಳಲು ನಿರ್ಧರಿಸಲಾಗಿದೆ. ಆದ್ದರಿಂದ, ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 66 ಎಂಪಿಜಡ್ 2018, ಬೆಂಗಳೂರು, ದಿನಾಂಕ: 16.01.2019**

ಬೆಳಗಾವಿ ತಾಲ್ಲೂಕಿನ ಬಾಗೇವಾಡಿ ಮತ್ತು ಸಾಂಬ್ರೆ ಹೋಬಳಿಗಳಲ್ಲಿ ಬರುವ 47 ಹಳ್ಳಿಗಳ 62 ಕೆರೆಗಳಿಗೆ ಹಿರೇಹಟ್ಟಿಹೋಳಿ ಗ್ರಾಮದ ಹತ್ತಿರ ಮಲಪ್ರಭಾ ನದಿಯಿಂದ 469.46 Mcft ನೀರನ್ನೆತ್ತಿ ತುಂಬಿಸುವ ರೂ. 379.92 ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 648 ಆಕೋ-1/2018, ದಿನಾಂಕ:09.01.2019ರಲ್ಲಿ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 45 ಎಂಸಿಎಂ 2018, ದಿನಾಂಕ: 07.12.2018ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

16/01/19

(ಬಿ.ಹರಿನಾರಾಯಣ),
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲಸಂಪನ್ಮೂಲ ಇಲಾಖೆ.

BSC 16/01/2019.

ಇವರಿಗೆ:-

1. ಮಹಾಲೇಖಪಾಲರು, (ಎ&ಇ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.

...3

5. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರ.
6. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಮಲಪ್ರಭಾ ಯೋಜನಾ ವಲಯ, ಧಾರವಾಡ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
9. ಸರ್ಕಾರದ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
10. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು (ಪ್ರಕರಣ ಸಂಖ್ಯೆ: ಸಿ:31/2019 ರಂತೆ ಮಾಹಿತಿಗಾಗಿ)
11. ನಿರ್ದೇಶಕರು, ಸಂಪೂರ್ಣ ಯೋಜನಾ ವಿಭಾಗ, ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ವಿಶೇಷಾಧಿಕಾರಿ ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋಇ–ಅಕೋ), ವಿಧಾನಸೌಧ, ಬೆಂಗಳೂರು.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.